ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಶನಿವಾರ 16ನೇ ಮೇ 1998 ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10 ಗಂಟೆ 20 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ರಮೇಶ್ ಕುಮಾರ್) ಅವರು ಪೀಠದಲ್ಲಿ ಉಪಸ್ಥಿತರಿದ್ದರು.

ಸಂತಾಪ ಸೂಚನೆ

ಅಧ್ಯಕ್ಷರು : ಮಾಜಿ ಶಾಸಕರಾದ ಶ್ರೀ ಎಫ್.ಎಸ್. ತಾವರೆಯವರು ದಿನಾಂಕ 15ನೇ ಮೇ, 1998ರಂದು ನಿಧನರಾದುದನ್ನು ವಿಷಾದದಿಂದ ಈ ಸದನಕ್ಕೆ ತಿಳಿಸುತ್ತಿದ್ದೇನೆ. ಶ್ರೀಯುತರಿಗೆ 75 ವರ್ಷ ವಯಸ್ಸಾಗಿತ್ತು. ಇವರು ಹಾವೇರಿ ಕ್ಷೇತ್ರದಿಂದ 3ನೇ, 5ನೇ ಮತ್ತು 6ನೇ ವಿಧಾನಸಭೆಗೆ ಆಯ್ಕೆ ಹೊಂದಿ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ. 1942ರಲ್ಲಿ ನಡೆದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಭಾಗವಹಿಸಿ, ಮೂರು ವರ್ಷ ಹತ್ತು ತಿಂಗಳು ಜೈಲು ವಾಸ ಅನುಭವಿಸಿದ್ದರು. ಹರಿಜನೋದ್ಧಾರ ಮತ್ತು ಇತರ ಕ್ರಾಂತಿಕಾರಕ ಚಳುವಳಿಗಳಲ್ಲಿ ಭಾಗವಹಿಸಿ ದೀನದಲಿತರಿಗೆ ಸಹಾಯ ಮಾಡಿರುತ್ತಾರೆ. ಸಹಕಾರಿ ಕ್ಷೇತ್ರದಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಮಾಜ ಸೇವೆ ಮತ್ತು ದೀನದಲಿತರ ಏಳಿಗೆಗಾಗಿ ದುಡಿದವರು. ಶ್ರೀಯುತರ ನಿಧನಕ್ಕೆ ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಒಂದು ನಿಮಿಷ ಎದ್ದು ನಿಂತು ಮೌನವನ್ನು ಆಚರಿಸಬೇಕೆಂದು ಕೋರುತ್ತೇನೆ.

(ಸದನವು ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನಾಚರಿಸಿತು)

ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಕಾರ್ಯದರ್ಶಿ, ವಿಧಾನಸಭೆ : ಅಧ್ಯಕ್ಷರೇ, ವಿಧಾನಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 1988ನೇ ಸಾಲಿನ ಕರ್ನಾಟಕ ಪೌರಸಭೆಗಳ ಮತ್ತು ಇತರೇ ಕಾನೂನು ತಿದ್ದುಪಡಿಗಳ ವಿಧೇಯಕವನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ದಿನಾಂಕ 15.5.99ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ರಹಿತ ಪ್ರಶ್ನೋತ್ತರಗಳನ್ನು ಮಂಡಿಸುವುದು.

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) : ಅಧ್ಯಕ್ಷರೇ, ತಾ. 15.5.1998ರಂದು ಪ್ರಶ್ನೋತ್ತರ ನಡೆಯದ ಕಾರಣ ಪ್ರಶ್ನೆಪಟ್ಟಿಯಲ್ಲಿ ಚುಕ್ಕೆ ಗುರುತಿನ ಒಟ್ಟು 15